ಅ. 1. ವಂತಿಕೆಯನ್ನು ಪಡೆಯಲು ಆದಷ್ಟು ಗ್ರಾಮಗಳಲ್ಲಿ ಜನರನ್ನು ಪ್ರೋತ್ಸಾಹಿಸಿ ಹಣವನ್ನು ಸಂಗ್ರಹಣೆ ಮಾಡಿ ಯೋಜನೆಗಳನ್ನು ಕಾರ್ಯಗತಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

2. ಜಲಮೂಲಗಳನ್ನು ಇತ್ಯರ್ಥಗೊಳಿಸಲು ಆಧುನಿಕ ಮಾರ್ಗಗಳನ್ನು ಅನುಸರಿಸಿ ಇತ್ಯರ್ಥಗೊಳಿಸಲಾಗಿದೆ.

3. ಜಲಾನಯನ ಪ್ರದೇಶವನ್ನು ಅಭಿವೃದ್ಧಿಗೊಳಿಸಿ ಜಲಸಂಗ್ರಹವನ್ನು ಹೆಚ್ಚಿಸಲಾಗಿದೆ.

4. ವಿದ್ಯುತ್ ಸರಬರಾಜನ್ನು ಶೀಘ್ರವಾಗಿ ಪಡೆಯಲು ಕ್ರಮ ತೆಗೆದುಕೊಳ್ಳಲಾಗಿದೆ.

5. ನೀರು ಸರಬರಾಜು ಸಮಿತಿಗಳನ್ನು ಪ್ರೋತ್ಸಾಹಿಸಿ ಯೋಜನೆಗಳನ್ನು ವಹಿಸಿಕೊಡಲಾಗಿದೆ.

6. ಗುತ್ತಿಗೆದಾರರ ಮೇಲೆ ನಿಯಮಾನುಸಾರ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗಿದೆ. ಕೆಲವು ಗುತ್ತಿಗೆಗಳನ್ನು ರದ್ದುಮಾಡಿ ಇಲಾಖಾ ವತಿಯಿಂದ ಕೆಲಸವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ ಅಲ್ಲದೆ ಕೆಲವೊಂದು ಹಳ್ಳಿಗಳ ಕಾಮಗಾರಿಯನ್ನು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗಗಳಿಂದ ಅನುಷ್ಠಾನಗೊಳಿಸಲಾಗುತ್ತಿದೆ.

7. ಬದಲಿ ಜಲಮೂಲಗಳನ್ನು ಹೊಂದಿಸಲಾಗಿದೆ.

ಆ. 1. 10 ಪೈಲಟ್ ಗ್ರಾಮಗಳಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ.

2. ಮೊದಲ ಹಂತದ 184 ಗ್ರಾಮಗಳಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಉಳಿದ 53 ಗ್ರಾಮಗಳಲ್ಲಿ ಕಾಮಗಾರಿಗಳನ್ನು ಏಪ್ರಿಲ್ 2000ರಲ್ಲಿ ಪೂರ್ಣಗೊಳಿಸಲು ಎಲ್ಲ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

3. ಎರಡನೇ ಹಂತದ 393 ಗ್ರಾಮಗಳಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಉಳಿದ 471 ಗ್ರಾಮಗಳಲ್ಲಿ ಕಾಮಗಾರಿಗಳನ್ನು ಜೂನ್ 2000ರಲ್ಲಿ ಪೂರ್ಣಗೊಳಿಸಲು ಎಲ್ಲ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

**ನೇತಾಜಿ ಸುಭಾಷ್ ಚಂದ್ರ ಬೋಸ್ ಪ್ರೌಢಶಾಲಾ ಕಟ್ಟಡಗಳು**

1046 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ಎಷ್ಟು ಪ್ರೌಢಶಾಲೆಗಳಿಗೆ ನೇತಾಜಿ ಸುಭಾಷ್ ಚಂದ್ರ ಬೋಸರ ಹೆಸರಿನಲ್ಲಿ ಶಾಲಾ ಕಟ್ಟಡಗಳಿಗೆ ಈವರೆಗೆ ಮಂಜೂರಾತಿ ನೀಡಲಾಗಿದೆ?*

ಅ) ಇವುಗಳಲ್ಲಿ ಈವರೆವಿಗೆ ಉದ್ಘಾಟಿಸಲ್ಪಟ್ಟಿರುವ ಕಟ್ಟಡಗಳೆಷ್ಟು?

ಇ) ಈ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಆಗಿರುವ ವಿಳಂಬಕ್ಕೆ ಕಾರಣಗಳೇನು? ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 224 ಪ್ರೌಢಶಾಲೆಗಳು.

ಆ) ಬಹುತೇಕ ಪ್ರೌಢಶಾಲಾ ಕಟ್ಟಡಗಳ ನಿರ್ಮಾಣ ಅಂತಿಮ ಹಂತದಲ್ಲಿದೆ.

ಇ) 1997-98ನೇ ಸಾಲಿನಿಂದ 99-2000ನೇ ಸಾಲಿನವರೆಗೆ ಪ್ರತಿ ಪ್ರೌಢಶಾಲೆಗಳಿಗೆ ರೂ. 9.00 ಲಕ್ಷಗಳನ್ನು (ಪ್ರತಿ ವರ್ಷ ರೂ. 3.00 ಲಕ್ಷದಂತೆ) ಬಿಡುಗಡೆ ಮಾಡಿರುವುದರಿಂದ, ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ.

**ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಪ್ರಾಥಮಿಕ ಆರೋಗ್ಯ ಘಟಕಗಳ ಸ್ಥಾಪನೆ**

1047 - ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ ಕ್ಷೇತ್ರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಬರಶಿಡ್ಲಹಳ್ಳಿ ಮತ್ತು ಕಮಲಾಪುರ ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

**ಬೆಂಗಳೂರಿನ ಕುರುಬರಹಳ್ಳಿಯಲ್ಲಿನ ಅರುಂಧತಿ ಕಾಲೇಜು ಆಫ್ ಫಾರ್ಮಸಿ**

1048 - ಶ್ರೀ ಸುರೇಶ್ ಕುಮಾರು ಎಸ್. (ರಾಜಾಜಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಕುರುಬರಹಳ್ಳಿಯಲ್ಲಿ (ಜೆ.ಸಿ. ನಗರ) ಅರುಂಧತಿ ಕಾಲೇಜ್ ಆಫ್ ಫಾರ್ಮಸಿ ಎಂಬ ಒಂದು ಕಾಲೇಜು 1994ರಲ್ಲಿ ಅಸ್ತಿತ್ವದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈಗ ಆ ಕಾಲೇಜು ನಡೆಯುತ್ತಿದೆಯೇ?